ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
Website : https://kptcl.karnataka.gov.in

ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560 009

---

ಓದಲಾಗಿದೆ:

1. ನಿಗಮದ ಆದೇಶ ಸಂಖ್ಯೆ: ಬಿ6/8379/2008-09 ದಿನಾಂಕ 15.07.2011
2. ನಿಗಮದ ಆದೇಶ ಸಂಖ್ಯೆ: ಬಿ4/9571/2020-21 ದಿನಾಂಕ 04.07.2020
3. ಸರ್ಕಾರದ ಆದೇಶ ಸಂಖ್ಯೆ: ಡಿ.ಪಿ.ಎ.ಆರ್/15/ ಎಸ್.ಎಂ.ಆರ್/2021 ದಿನಾಂಕ 01.04.2021
4. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ನೌಕರರ ಸಂಘ ರವರ ಮನವಿ ಪತ್ರ, ಸಂಖ್ಯೆ: KPTCEU/69/2021-22 ದಿನಾಂಕ: 04.05.2021.

ಪ್ರಸ್ತಾವನೆ:

ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ನೌಕರರ ಸಂಘ ರವರ ಮನವಿ ಪತ್ರದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗವು ವ್ಯಾಪಕವಾಗಿ ಹರಡುತ್ತಿದ್ದು ಅಗತ್ಯ ಸೇವೆಯಡಿಯಲ್ಲಿ ಬರುವ 'ಕವಿಪ್ರನಿನಿ/ ವಿದ್ಯುತ್ ಸರಬರಾಜು ಕಂಪನಿಗಳು/ಪಿ.ಸಿ.ಕೆ.ಎಲ್ ನಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ/ನೌಕರರು ನಿರಂತರ ವಿದ್ಯುತ್ ಪ್ರಸರಣ ಮತ್ತು ವಿತರಣೆ ಕಾರ್ಯದಲ್ಲಿ ತೊಡಗಿಸಿಕೊಂಡಿರುವಾಗ, ಆಕಸ್ಮಿಕವಾಗಿ ಕೋವಿಡ್ ಸೋಂಕಿಗೆ ಒಳಗಾಗುತ್ತಿದ್ದು ಇದು ಕುಟುಂಬದ ಅವಲಂಬಿತ ಸದಸ್ಯರಿಗೂ ಸಹಾ ಹರಡುತ್ತಿದ್ದು ಚಿಕಿತ್ಸೆಗೆ ಸರ್ಕಾರಿ/ಖಾಸಗಿ ಆಸ್ಪತ್ರೆಗೆ ದಾಖಲಾಗುತ್ತಿದ್ದು ಚಿಕಿತ್ಸೆಗಳಿಗಾಗಿ, ಅಂದಾಜು ವೆಚ್ಚವನ್ನು ಖಾಸಗಿ ಆಸ್ಪತ್ರೆಗಳಲ್ಲಿ ಮುಂಗಡವಾಗಿ ಠೇವಣಿ ಮಾಡಬೇಕಾಗಿರುವುದನ್ನು ಪರಿಗಣಿಸಿ ವೈದ್ಯಕೀಯ ಮುಂಗಡ ಮಂಜೂರು ಮಾಡಲು ಕೋರಿರುವುದರಿಂದ, ಮನವಿಯನ್ನು ಪರಿಗಣಿಸಿ ಈ ಕೆಳಕಂಡಂತೆ ಆದೇಶವನ್ನು ಹೊರಡಿಸಿದೆ.

ಆದೇಶ ಸಂಖ್ಯೆ: ಕವಿಪ್ರನಿನಿ/ಬಿ4/20966/2021-22 ಬೆಂಗಳೂರು, ದಿನಾಂಕ: - 7 MAY 2021

ವಿಶ್ವ ಆರೋಗ್ಯ ಸಂಸ್ಥೆಯು ಕೋವಿಡ್-19 ಕಾಯಿಲೆಯನ್ನು ಸರ್ವವ್ಯಾಪಿ ಸಾಂಕ್ರಾಮಿಕ ರೋಗವೆಂದು ಘೋಷಣೆ ಮಾಡಿದ್ದು, ಈ ರೋಗವು ವ್ಯಾಪಕವಾಗಿ ಹರಡುತ್ತಿರುವುದರಿಂದ ಅಗತ್ಯ ಸೇವೆಗಳಡಿಯಲ್ಲಿ ಗುರುತಿಸಿಕೊಂಡು ಕಾರ್ಯನಿರ್ವಹಿಸುತ್ತಿರುವ ಕವಿಪ್ರನಿನಿ/ವಿದ್ಯುತ್ ಸರಬರಾಜು ಕಂಪನಿಗಳು/ಪಿ.ಸಿ.ಕೆ.ಎಲ್.ನ ಅಧಿಕಾರಿ/ನೌಕರರು ಕೋವಿಡ್ ವಿಷಮ ಪರಿಸ್ಥಿತಿಯಲ್ಲೂ ನಿರಂತರ ವಿದ್ಯುತ್ ಪ್ರಸರಣ ಮತ್ತು ವಿತರಣೆ ಕಾರ್ಯದಲ್ಲಿ ತೊಡಗಿಸಿಕೊಂಡಿರುವಾಗ, ಆಕಸ್ಮಿಕವಾಗಿ ಕೋವಿಡ್ ಸೋಂಕಿಗೆ ಒಳಗಾಗುತ್ತಿದ್ದು ಇದು ಕುಟುಂಬದ ಅವಲಂಬಿತ ಸದಸ್ಯರಿಗೂ ಹರಡುತ್ತಿದೆ.

ಕೋವಿಡ್ ಸೋಂಕಿಗೊಳಗಾದ ಅಧಿಕಾರಿ/ನೌಕರ ಮತ್ತು ಕುಟುಂಬ ಸದಸ್ಯರು ಚಿಕಿತ್ಸೆಗಾಗಿ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುವ ಸಂದರ್ಭದಲ್ಲಿ, ಮುಂಗಡವಾಗಿ ಠೇವಣಿ ಮಾಡಲು ಬೇಡಿಕೆ ಇಡುತ್ತಿರುವುದನ್ನು ಪರಿಗಣಿಸಿ ಈಗಾಗಲೇ ನಿಗಮದಲ್ಲಿ ಮಾರಣಾಂತಿಕ ಕಾಯಿಲೆಗಳಿಗೆ ಒಡಂಬಡಿಕೆ ಹೊಂದಿರದ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯಲು ಒಟ್ಟು ಅಂದಾಜು ಚಿಕಿತ್ಸಾ ವೆಚ್ಚದ ಶೇ.75 ರಷ್ಟನ್ನು

ಮಂಜೂರು ಮಾಡುತ್ತಿರುವ ಕ್ರಮದಂತೆಯೇ, ಕೋವಿಡ್ ಪ್ರಕರಣಗಳನ್ನು ಮಾರಣಾಂತಿಕವೆಂದು ಪರಿಗಣಿಸಿ ಒಟ್ಟು ಅಂದಾಜು ಚಿಕಿತ್ಸಾ ವೆಚ್ಚದ ಶೇ.75% ರಷ್ಟನ್ನು ವೈದ್ಯಕೀಯ ಮುಂಗಡವಾಗಿ ಪಾವತಿಸಲು ಹಾಗೂ ಚಿಕಿತ್ಸಾನಂತರ ಸಲ್ಲಿಸುವ ಅಂತಿಮ ಬಿಲ್ಲನ್ನು ಉಲ್ಲೇಖ 2 ರಲ್ಲಿ ನಿಗದಿಪಡಿಸಿರುವ ಕೋವಿಡ್ ಪ್ಯಾಕೇಜ್ ದರಗಳಿಗೆ ಅನುಗುಣವಾಗಿ ಮಿತಿಗೊಳಿಸಿ ಮುಂಗಡವನ್ನು ಸಕ್ರಮಗೊಳಿಸುವ, ಉಳಿದ ಮೊತ್ತವನ್ನು ಪಾವತಿಸುವ, ಮುರಿಕೆ ಮಾಡಬೇಕಾದಲ್ಲಿ ಸಂಬಳ ಮತ್ತು ನಿವೃತ್ತಿ ಸವಲತ್ತುಗಳಿಂದ ಕಡಿತಗೊಳಿಸುವ ಷರತ್ತಿಗೊಳಪಟ್ಟು ಮುಂಗಡವನ್ನು ಮಂಜೂರು ಮಾಡಲು ಅನುಮೋದನೆ ನೀಡಲಾಗಿದೆ. ಈ ರೀತಿ ಮುಂಗಡ ಬೇಕಾದಲ್ಲಿ ಮುಂಚಿತವಾಗಿ ಒಪ್ಪಿಗೆ ಪತ್ರವನ್ನು ನೀಡತಕ್ಕದ್ದು.

ಮಾನ್ಯ ವ್ಯವಸ್ಥಾಪಕ ನಿರ್ದೇಶಕರು
ರವರಿಂದ ಅನುಮೋದಿಸಲ್ಪಟ್ಟಿದೆ.

ಪ್ರಧಾನ ವ್ಯವಸ್ಥಾಪಕರು (ಸಿಬ್ಬಂದಿ)
ಕವಿಪ್ರನಿನಿ

**ಪ್ರತಿಗಳು:**

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಜೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಪಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು (ತಾಂತ್ರಿಕ), ಎಸ್ಕಾಂಗಳು.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
4. ಎಲ್ಲಾ ಮುಖ್ಯ ಇಂಜಿನಿಯರ್ (ವಿ) ಕವಿಪ್ರನಿನಿ/ಎಸ್ಕಾಂಗಳು.
5. ವ್ಯವಸ್ಥಾಪಕ ನಿರ್ದೇಶಕರು/ ನಿರ್ದೇಶಕರು (ಪ್ರಸರಣ)(ಹಣಕಾಸು)/(ಆ ಮತ್ತು ಮಾ.ಸಂ.) ಕವಿಪ್ರನಿನಿ ಇವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು.
6. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
7. ಎಲ್ಲಾ ಕಾರ್ಯ ನಿರ್ವಾಹಕ ಇಂಜಿನಿಯರ್ (ವಿ)/ ಉಪ ಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ ಎಸ್ಕಾಂಗಳು.
8. ನಿಗಮ ಕಾರ್ಯಾಲಯದ ಎಲ್ಲಾ ಅಧಿಕಾರಿಗಳು, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
9. ಲೆಕ್ಕಾಧಿಕಾರಿ, ಕ್ರೋಢೀಕರಣ ಘಟಕ, ಕವಿಪ್ರನಿನಿ, ಕಾವೇರಿಭವನ, ಬೆಂಗಳೂರು.

**ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ https://kptcl.karnataka.gov.in ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ.**

ಮೆಮೋಸಂಖ್ಯೆ:ಪ್ರವ್ಯ(ಆ)/ಲೆ(ಸಿ)/ಸಲೆ(ಸಿ)/ಸ(ಸಿ)-1/2021-22 ದಿನಾಂಕ:- 11 MAY 2021

**ಪ್ರತಿ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ** C41-618

1. ಮುಖ್ಯ ಇಂಜಿನೀಯರ್(ವಿ)/ನಿಯಂತ್ರಣಾಧಿಕಾರಿಗಳು ಕಾ ಮತ್ತು ಪಾ ವಲಯ, ಹುವಿಸಕಂನಿ., ಹುಬ್ಬಳ್ಳಿ/ಬೆಳಗಾವಿ.
2. ಎಲ್ಲಾ ಅಧೀಕ್ಷಕ ಇಂಜಿನೀಯರ್(ವಿ)/ಉಪ ಲೆಕ್ಕನಿಯಂತ್ರಣಾಧಿಕಾರಿಗಳು ಕಾ ಮತ್ತು ಪಾ ವೃತ್ತ, ಹುವಿಸಕಂನಿ.,
3. ಪ್ರಧಾನ ವ್ಯವಸ್ಥಾಪಕರು(ತಾಂತ್ರಿಕ), ಕಂಪನಿ ಕಾರ್ಯಾಲಯದ ಹುವಿಸಕಂನಿ, ಹುಬ್ಬಳ್ಳಿ ರವರ ಮಾಹಿತಿಗಾಗಿ.
4. ಅಧೀಕ್ಷಕ ಇಂಜಿನೀಯರ್(ವಿ),ಟಿ&ಪಿ/ಪಿಎಂಸಿ/ಐಟಿ&ಎಂಟಿ ಕಂಪನಿ ಕಾರ್ಯಾಲಯದ ಹುವಿಸಕಂನಿ, ಹುಬ್ಬಳ್ಳಿ
5. ಎಲ್ಲಾ ಕಾರ್ಯನಿರ್ವಾಹಕ ಇಂಜಿನೀಯರ್(ವಿ), ಕಾ ಮತ್ತು ಪಾ ವಿಭಾಗ, ಹುವಿಸಕಂನಿ.,
6. ಎಲ್ಲಾ ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರ್(ವಿ), ಕಾ ಮತ್ತು ಪಾ ಉಪ-ವಿಭಾಗ, ಹುವಿಸಕಂನಿ.,

ಸದರಿ ಸುತ್ತೋಲೆಯಲ್ಲಿನ ನಿರ್ದೇಶನಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ತಮ್ಮ ಅದೀನದಲ್ಲಿರುವ ಎಲ್ಲಾ ಅಧಿಕಾರಿ/ನೌಕರರಿಗೆ ಸೂಚಿಸುವಂತೆ ಕೋರಿದೆ.ಸದರಿ ಸುತ್ತೋಲೆಯನ್ನು ಕವಿಪ್ರನಿನಿಯ ಜಾಲತಾಣ:https://kptcl.karnataka.gov.in ದಲ್ಲಿ ಪಡೆಯಬಹುದಾಗಿದೆ.

ಪ್ರತಿಗಳು: 1.ಆರ್ಥಿಕ ಸಲಹೆಗಾರರು(ಆಂ.ಪ), ಕಂಪನಿ ಕಾರ್ಯಾಲಯದ ಹುವಿಸಕಂನಿ, ಹುಬ್ಬಳ್ಳಿ ರವರ ಮಾಹಿತಿಗಾಗಿ.

2.ಹಿರಿಯ ಆಪ್ತ ಕಾರ್ಯದರ್ಶಿ,ವ್ಯವಸ್ಥಾಪಕ ನಿರ್ದೇಶಕರು/ ನಿರ್ದೇಶಕರು(ತಾಂತ್ರಿಕ), ಕಂಪನಿ ಕಾರ್ಯಾಲಯ,ಹುವಿಸಕಂನಿ, ಹುಬ್ಬಳ್ಳಿ ರವರ ಮಾಹಿತಿಗಾಗಿ,ಹಾಗೂ ಮೇಲ್ಕಂಡ ಅಂಶಗಳನ್ನು ಮಾನ್ಯರ ಗಮನಕ್ಕೆ ತರಲು ಕೋರಿದೆ.

3.ಆಪ್ತ ಕಾರ್ಯದರ್ಶಿ,ನಿರ್ದೇಶಕರು(ಹಣಕಾಸು)/ಮುಖ್ಯ ಅರ್ಥಿಕ ಅಧಿಕಾರಿ, ಕಂಪನಿ ಕಾರ್ಯಾಲಯದ ಹುವಿಸಕಂನಿ, ಹುಬ್ಬಳ್ಳಿ ರವರ ಮಾಹಿತಿಗಾಗಿ,ಹಾಗೂ ಮೇಲ್ಕಂಡ ಅಂಶಗಳನ್ನು ಮಾನ್ಯರ ಗಮನಕ್ಕೆ ತರಲು ಕೋರಿದೆ.

**ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ hescom.karnataka.gov.in ವೆಬ್ ಸೈಟನಲ್ಲಿ ಪ್ರಕಟಿಸಲಾಗಿದೆ.**

ಪ್ರಧಾನ ವ್ಯವಸ್ಥಾಪಕರು(ಆಡಳಿತ ಮತ್ತು ಮಾ.ಸಂ.ಅ)
ನಿಗಮ ಕಾರ್ಯಾಲಯ ಹುವಿಸಕಂನಿ ಹುಬ್ಬಳ್ಳಿ